# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ ದಿನಾಂಕ: 03-04-2021 ರಂದು ನಡೆದ

## ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ರಜನಿಕಾಂತ್ ಮಲ್ಲಿ, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.
2. ಶ್ರೀ.ಮಲ್ಲಿನಾಥ ಮಲ್ಲಾಪುರ, ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ.ರಮೇಶ್ ಸಹಾಯಕ ಕಾರ್ಯಪಾಲಕ ಅಭಿಯಂತರರ ಬಿಡಬ್ಲ್ಯೂ.ಎಸ್.ಎಸ್.ಬಿ
4. ಶಶಿಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ
5. ಶ್ರೀ. ಲಿಂಗರಾಜು ಹಿರಿಯ ಆರೋಗ್ಯ ಪರಿವೀಕ್ಷಕರು.
6. ಶ್ರೀ.ವಿವೇಕ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01.
7. ಡಾ. ಶಾಲಿನಿ ವೈದ್ಯಾಧಿಕಾರಿಗಳು ಕೊವಿಡ್ (ಎ.ಪಿ.ಟಿ.ಎಸ್)

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 01 | ಕೆಂಪೇಗೌಡ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿ ರೈತರ ಸಂತೆ, ಕೋಗಿಲು ವೃತ್ತದ ಹತ್ತಿರ, ಕ್ಯಾನೊಪಿ ಎದುರು ಅಪೂರ್ವ ಆಸ್ಪತ್ರೆ, ಉಡುಪಿ ಗಾರ್ಡನ್ ಹತ್ತಿರ ರಾತ್ರಿಯ ವೇಳೆ ಹೊಟೆಲ್‌ಗಳಿಂದ ಕಸವನ್ನು ಸುರಿಯುತ್ತಿದ್ದು, ರಾತ್ರಿಯ ವೇಳೆ ಮಾರ್ಷಲ್‌ಗಳನ್ನು ರೌಂಡಿಂಗ್ ಮಾಡುವಂತೆ ಹಾಗೂ ಸ್ಥಳದಲ್ಲಿ ದಂಡ ವಿಧಿಸಲು ಸ್ಥಳೀಯರಾದ ಮೊಹನ್ ರವರು ಸಭೆಯಲ್ಲಿ ಕೋರಿದರು. | ನೊಡೆಲ್ ಅಧಿಕಾರಿಗಳು ಸಂಬಂದಪಟ್ಟ ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಹೊಟೆಲ್ ಮಾಲೀಕರಿಗೆ ದಂಡ ವಿಧಿಸಲು ಸೂಚಿಸಿದರು. | ಹಿರಿಯ ಆರೋಗ್ಯ ಪರಿವೀಕ್ಷಕರು ಯಲಹಂಕ ವಲಯ |
| 02 | ಕೆಂಪೇಗೌಡ ವಾರ್ಡ್ ನಂ -01ರ ವ್ಯಾಪ್ತಿಯಲ್ಲಿ ಕೊರೊನಾ ಸಂಬಂಧ ಇಂದಿರಾ ಕ್ಯಾಂಟಿನ್‌ನಲ್ಲಿ ಕಾರ್ಯನಿರ್ವಹಿಸುತ್ತಿರುವ ಮಾರ್ಷಲ್‌ಗಳಿಗೆ ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಮಾಸ್ಕ ದಂಡ ವಿಧಿಸುವುದನ್ನು ನಿಷೇದಿಸಲಾಗಿದೆ ಎಂಬುದಾಗಿ ಸ್ಥಳೀಯರಾದ ಮೋಹನ್ ರವರು ಸಭೆಯಲ್ಲಿ ಅಕ್ಷೇಪಣೆ ವ್ಯಕ್ತಪಡಿಸಿದರು. | ನೊಡೆಲ್ ಅಧಿಕಾರಿಗಳು ಸಂಬಂದಪಟ್ಟ ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಕ್ರಮ ಮಾಸ್ಕ್ ಹಾಕದೇ ಇರುವವರಿಗೆ ದಂಡ ವಿಧಿಸುವ ಬಗ್ಗೆ ಸೂಕ್ತ ಕ್ರಮ ವಹಿಸುವಂತೆ ಸೂಚಿಸಿದರು. | ಹಿರಿಯ ಆರೋಗ್ಯ ಪರಿವೀಕ್ಷಕರು ಯಲಹಂಕ ವಲಯ |
| 03 | ಕೆಂಪೇಗೌಡ ವಾರ್ಡ್ ನಂ -01ರ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ವತಿಯಿಂದ ಕಾವೇರಿ ನೀರು ಸಂಪರ್ಕ ಪಡೆಯಲು ಹಾಗೂ ಒಳಚರಂಡಿ ಸಂಪರ್ಕ ಪಡೆಯಲು ತೊಂದರೆ ಉಂಟಾಗುತ್ತಿದ್ದು, ಸದರಿಯವರಿಗೆ | ಇದಕ್ಕೆ ಬಿ.ಡಬ್ಲ್ಯೂಎಸ್/ಎಸ್.ಬಿ ಸಹಾಯಕ ಕಾರ್ಯಪಾಲಕ ಅಭಿಯಂತರರು ಉತ್ತರಿಸಿ ಸಾರ್ವಜನಿಕರು ಕಾವೇರಿ ಬಿಲ್ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂಎಸ್.ಎಸ |

| | | | |
|---|---|---|---|
| | ಅನಾನುಕೂಲವಾಗಿರುವುದಾಗಿ ಅಧಿಕಾರಿಗಳು ಸ್ಪಂದಿಸುತ್ತಿಲ್ಲವೆಂದು ಸಭೆಯಲ್ಲಿ ಸಾರ್ವಜನಿಕರು ಅಕ್ಷೇಪಣೆ ವ್ಯಕ್ತಪಡಿಸಿದರು. | ಸಮೇತ ಬಿ.ಡಬ್ಲ್ಯೂಎಸ್.ಎಸ್.ಬಿ ಕಛೇರಿಯಲ್ಲಿರುವ ದೂರಿನ ಪುಸ್ತಕದಲ್ಲಿ ದೂರನ್ನು ಸಲ್ಲಿಸಿ ಅವರ ಸಮಸ್ಯೆಗಳನ್ನು ಬಗೆ ಹರಿಸಿಕೊಳ್ಳಲು ಸಭೆಯಲ್ಲಿ ತಿಳಿಸಿದರು. | ್.ಬಿ ಇಲಾಖೆ) |
| 04 | ಕೆಂಪೇಗೌಡ ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಬಾಂಗ್ಲಾಶಾಲೆಯ ಹಿಂಭಾಗ ಇರುವ ಬೋರ್‌ವೆಲ್ ಸಮಸ್ಯೆ ಇರುವುದಾಗಿ ತಿಳಿಸಿದರು. | ನೋಡೆಲ್ ಅಧಿಕಾರಿಗಳು ಸಂಬಂದಿಸಿದ ಬಿ.ಡಬ್ಲ್ಯೂಎಸ್.ಎಸ್.ಬಿ ಸಹಾಯಕ ಅಭಿಯಂತರರಿಗೆ ಕ್ರಮ ಕೈಗೊಳ್ಳುವಂತೆ ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂಎಸ್.ಎಸ ್.ಬಿ ಇಲಾಖೆ) |
| 05 | ಕೆಂಪೇಗೌಡ ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಮಾರುತಿನಗರ 27ನೇ ಕ್ರಾಸ್ 2ನೇ ಹಂತ, ಸರ್ವೆ ನಂ 75ರಲ್ಲಿ ಸೈಟ್ ನಂ 30 ಮತ್ತು 31 ನಂಬರ್‌ನ ಪಕ್ಕದಲ್ಲಿ ರಸ್ತೆ ಇಲ್ಲದಿರುವ ಬಗ್ಗೆ ಹಾಗೂ ಈ ಸೈಟ್‌ಅನ್ನು ಸುಮಾರು 25 ವರ್ಷಗಳ ಹಿಂದೆ ಖರಿದಿಸಿದ್ದು, ದಾರಿಯ ಬಗ್ಗೆ ಸಮಸ್ಯೆ ಇರುವುದಾಗಿ ಸಭೆಯಲ್ಲಿ ವೈ.ಎಸ್.ಚೆನ್ನಕೇಶವರವರ ಮೇಲೆ ಸೇಪಿ ರವರು ದೂರನ್ನು ಸಲ್ಲಿಸಿದರು. | ನೊಡೆಲ್ ಅಧಿಕಾರಿಗಳು ಸಂಬಂದಿಸಿದ ಸಹಾಯಕ ಅಭಿಯಂತರರು ವಾರ್ಡ್ ನಂ-01 ರವರಿಗೆ ಸ್ಥಳ ಪರಿಶೀಲನೆ ಮಾಡಲು ಸೂಚಿಸಿದರು. | ಸಹಾಯಕ ಅಭಿಯಂತರರು (ವಾರ್ಡ್-1) |

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

**ಪ್ರತಿಯನ್ನು:**

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ರಜನಿಕಾಂತ್ ಮಲ್ಲಿ, ಅಧ್ಯಕ್ಷರು ಹಾಗೂ ನೊಡಲ್ ಅಧಿಕಾರಿಗಳು.

ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.